# ಕರ್ನಾಟಕ ವಿಧಾನ ಪರಿಷತ್ತು

ಲಘು ಪ್ರಕಟಣೆ ಭಾಗ– 2

(ಸಾಂಸದಿಕ ಹಾಗೂ ಇತರೆ ವಿಷಯಗಳಿಗೆ ಸಂಬಂಧಿಸಿದ ಸಾಮಾನ್ಯ ಮಾಹಿತಿ)

ಮಂಗಳವಾರ, ದಿನಾಂಕ: 19ನೇ ಜನವರಿ, 2021

**ಸಂಖ್ಯೆ: 10**

**ವಿಷಯ: ಉಪ ಸಭಾಪತಿ ಸ್ಥಾನಕ್ಕೆ ಚುನಾವಣೆ.**

*****

ವಿಧಾನ ಪರಿಷತ್ತಿನ ಕಾರ್ಯವಿಧಾನ ಮತ್ತು ನಡವಳಿಕೆಯ ನಿಯಮ 8(1)ರ ಅನ್ವಯ ಉಪ ಸಭಾಪತಿಯವರ ಸ್ಥಾನಕ್ಕೆ ಚುನಾವಣೆಯನ್ನು ಮಾನ್ಯ ಸಭಾಪತಿಯವರು ಶುಕ್ರವಾರ, ದಿನಾಂಕ: 29ನೇ ಜನವರಿ, 2021ರಂದು ನಡೆಸತಕ್ಕದೆಂದು ಗೊತ್ತುಪಡಿಸಿರುತ್ತಾರೆ.

ಚುನಾವಣೆ ಗೊತ್ತುಮಾಡಿದ ದಿನಾಂಕ: 29.01.2021ರ ಹಿಂದಿನ ದಿನ ಅಂದರೆ ದಿನಾಂಕ: 28.01.2021ರ ಮಧ್ಯಾಹ್ನ:03.00 ಗಂಟೆಗೆ ಮೊದಲು ಯಾವುದೇ ಕಾಲದಲ್ಲಿ ಯಾವೊಬ್ಬ ಸದಸ್ಯನು ಇನ್ನೊಬ್ಬ ಸದಸ್ಯನನ್ನು ಉಪ ಸಭಾಪತಿಯವರನ್ನಾಗಿ ಆರಿಸುವ ಬಗ್ಗೆ ಕಾರ್ಯದರ್ಶಿಯವರಿಗೆ ಹೆಸರಿಸಿ ಕೊಠಡಿ ಸಂಖ್ಯೆ:156–ಸಿ, ವಿಧಾನ ಸೌಧದ ಮೊದಲನೆ ಮಹಡಿ, ವಿಧಾನ ಸೌಧ, ಬೆಂಗಳೂರು ಇಲ್ಲಿ ಲಿಖಿತ ಮೂಲಕ ಸೂಚನೆಯನ್ನು ಅಭ್ಯರ್ಥಿಯು ಅವರ ಹೆಸರನ್ನು ಸೂಚಿಸುವವರೊಂದಿಗೆ ಅಥವಾ ಅನುಮೋದಕರೊಂದಿಗೆ ಖುದ್ದಾಗಿ ಸಲ್ಲಿಸತಕ್ಕದ್ದು. ಆ ಸೂಚನೆಯು ಮೂರನೇ ಸದಸ್ಯರಿಂದ ಅನುಮೋದಿಸತಕ್ಕದ್ದು ಮತ್ತು ಯಾವ ಸದಸ್ಯರ ಹೆಸರು ಸೂಚಿತವಾಗಿದೆಯೋ ಅವರು ತಾವು ಉಪ ಸಭಾಪತಿಯಾಗಿ ಚುನಾಯಿತರಾದಲ್ಲಿ, ಉಪ ಸಭಾಪತಿಯಾಗಿ ಸೇವೆ ಸಲ್ಲಿಸಲು ಒಪ್ಪಿರುವರೆಂದು ತಿಳಿಸುವ ಹೇಳಿಕೆಯನ್ನು ಸೂಚನೆಗೆ ಲಗತ್ತಿಸತಕ್ಕದ್ದು.

ಪರಂತು, ಯಾವೊಬ್ಬ ಸದಸ್ಯನು ತನ್ನ ಹೆಸರನ್ನು ತಾನೇ ಸೂಚಿಸತಕ್ಕದ್ದಲ್ಲ ಅಥವಾ ತನ್ನ ಹೆಸರನ್ನು ಸೂಚಿಸುವ ಯಾವುದೇ ಪ್ರಸ್ತಾವವನ್ನು ಅನುಮೋದಿಸತಕ್ಕದ್ದಲ್ಲ ಅಥವಾ ಒಂದಕ್ಕಿಂತ ಹೆಚ್ಚು ಪ್ರಸ್ತಾವಗಳನ್ನು ಸೂಚಿಸತಕ್ಕದ್ದಲ್ಲ ಮತ್ತು ಅನುಮೋದಿಸತಕ್ಕದ್ದಲ್ಲ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

**ವಿಧಾನ ಪರಿಷತ್ತಿನ ಎಲ್ಲಾ ಮಾನ್ಯ ಸದಸ್ಯರುಗಳಿಗೆ,**